ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1527
ಉತ್ತರಿಸಬೇಕಾದ ದಿನಾಂಕ : 24.09.2021.
ಸದಸ್ಯರ ಹೆಸರು : ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯಾದ್ಯಂತ ಯುವ ಸಬಲೀಕರಣ ಕೇಂದ್ರಗಳನ್ನು ಸ್ಥಾಪಿಸಲಾಗಿದೆಯೇ; ರಾಜ್ಯದ ಯಾವ ಯಾವ ಜಿಲ್ಲಾ ಕೇಂದ್ರಗಳಲ್ಲಿ ಸ್ಥಾಪಿಸಲಾಗಿದೆ; (ವಿವರ ನೀಡುವುದು)	ಹೌದು, ಯುವ ಸಬಲೀಕರಣ ಕೇಂದ್ರ (ಯುವ ಸ್ಪಂದನ ಕೇಂದ್ರ) ವನ್ನು ರಾಜ್ಯದ 30 ಜಿಲ್ಲೆಯಲ್ಲಿ ಇಲಾಖೆಯ ಕ್ರೀಡಾಂಗಣಗಳಲ್ಲಿ ತೆರೆಯಲಾಗಿದೆ.
ಆ)	ಯುವ ಸಬಲೀಕರಣ ಕೇಂದ್ರಗಳ ಗುರಿ ಮತ್ತು ಉದ್ದೇಶಗಳೇನು; ಈ ಯೋಜನೆಗಾಗಿ ಸರ್ಕಾರವು ಒದಗಿಸುತ್ತಿರುವ ಅನುದಾನವೆಷ್ಟು; (ವಿವರ ನೀಡುವುದು)	ಯುವ ಸಬಲೀಕರಣ ಕೇಂದ್ರ (ಯುವ ಸ್ಪಂದನ ಕೇಂದ್ರ)ವು ಕೆಳಕಾಣಿಸಿದಂತೆ ಉದ್ದೇಶ ಹೊಂದಿರುತ್ತದೆ : 1) ಯುವ ಜನರು ಸಬಲರಾಗಲು, ಅವರು ತಮ್ಮಲ್ಲಿನ ಸಾಮರ್ಥ್ಯಗಳನ್ನು ಕಂಡುಕೊಳ್ಳುವಲ್ಲಿ ಅಗತ್ಯ ಪೂರಕ ವಾತಾವರಣ ಮತ್ತು ಸೌಲಭ್ಯಗಳನ್ನು ಒದಗಿಸುವುದು. 2) ಯುವ ಜನರು ತಮ್ಮ ಜ್ಞಾನ, ಕೌಶಲ್ಯ, ಸ್ವಭಾವ ಮತ್ತು ನಡವಳಿಕೆಯನ್ನು ಉನ್ನತೀಕರಿಸಿಕೊಳ್ಳಲು ತಮ್ಮನ್ನು ಧನಾತ್ಮಕವಾಗಿ ಬದಲಾಯಿಸಿಕೊಳ್ಳುವಂತೆ ಮಾಡುವುದು. 3) ಯುವಜನರು ತಮ್ಮ ಪ್ರತಿಭೆ ಮತ್ತು ಸಾಮರ್ಥ್ಯಕ್ಕೆ ಸೂಕ್ತವಾದ ಶಿಕ್ಷಣ ಹಾಗೂ ಕೌಶಲ್ಯಗಳನ್ನು ಪಡೆಯಲು ಅಗತ್ಯವಾದ ಸಂಪರ್ಕ ಸೇತುವಾಗಿ ಕಾರ್ಯನಿರ್ವಹಿಸುವುದು. 4) ಯುವಜನ ಅಭಿವೃದ್ಧಿಗಾಗಿ ಇರುವ ಎಲ್ಲಾ ಕಾರ್ಯಕ್ರಮಗಳ ಪ್ರಯೋಜನ ಪಡೆಯಲು ಯುವಜನರಿಗೆ ಏಕಗಾವಾಕ್ಷಿ ಕೇಂದ್ರವಾಗಿ ಕಾರ್ಯನಿರ್ವಹಿಸುವುದು. ಈ ಯುವ ಸ್ಪಂದನ ಕಾರ್ಯಕ್ರಮಕ್ಕೆ 2021-22 ನೇ ಸಾಲಿನಲ್ಲಿ ರೂ. 250.00 ಲಕ್ಷ ಅನುದಾನವನ್ನು ನಿಮ್ಹಾನ್ಸ್ ಸಂಸ್ಥೆಗೆ ಬಿಡುಗಡೆ ಮಾಡಲಾಗಿದೆ.

ಇ)	ರಾಜ್ಯದ ಜಿಲ್ಲೆಗಳಲ್ಲಿ ಯುವ ಸಬಲೀಕರಣ ಕೇಂದ್ರ ಸ್ಥಾಪಿಸಿ ಎಷ್ಟು ಜನ ನಿರುದ್ಯೋಗಿಗಳಿಗೆ ಮತ್ತು ವಿದ್ಯಾರ್ಥಿಗಳಿಗೆ ಇಂಟರ್ನ್ ಶಿಪ್ ತರಬೇತಿ ನೀಡಿ ಉದ್ಯೋಗ ಒದಗಿಸಲಾಗಿದೆ; (ವಿವರ ನೀಡುವುದು)	ರಾಜ್ಯದಲ್ಲಿ ಯುವ ಸಬಲೀಕರಣ ಕೇಂದ್ರ (ಯುವ ಸ್ಪಂದನ ಕೇಂದ್ರ) ದಲ್ಲಿ ನಿರುದ್ಯೋಗಿಗಳಿಗೆ ಉದ್ಯೋಗವನ್ನು ಹೊರತುಪಡಿಸಿ 1,81,145 ಯುವಕರು ಮತ್ತು 1,64,126 ಯುವತಿಯರು ಸೇರಿದಂತೆ ಒಟ್ಟು 3,45,271 ಯುವಜನರಿಗೆ ಮಾರ್ಗದರ್ಶನ (Counseling) ವನ್ನು ನೀಡಲಾಗಿದೆ.
ಈ)	ನಿರುದ್ಯೋಗಿಗಳನ್ನು ಗುರುತಿಸಿ ಯುವ ಸಬಲೀಕರಣ ಕೇಂದ್ರದ ಮೂಲಕ ಅಗತ್ಯ ತರಬೇತಿಗಳನ್ನು ನೀಡಿ ಅವರ ಕೌಶಲ್ಯಕ್ಕನುಗುಣವಾಗಿ ಉದ್ಯೋಗಗಳನ್ನು ದೊರಕಿಸಿಕೊಡಲು ಸರ್ಕಾರವು ಹಮ್ಮಿಕೊಂಡಿರುವ ವಿವಿಧ ಕಾರ್ಯಕ್ರಮಗಳೇನು? (ವಿವರ ನೀಡುವುದು)	ನಿರುದ್ಯೋಗಿಗಳನ್ನು ಗುರುತಿಸಿ ಯುವ ಸಬಲೀಕರಣ ಕೇಂದ್ರದ ಮೂಲಕ ಕೌಶಲ್ಯಕ್ಕನುಗುಣವಾಗಿ ಉದ್ಯೋಗಗಳನ್ನು ದೊರಕಿಸಿಕೊಡುವ ಯಾವುದೇ ಕಾರ್ಯಕ್ರಮಗಳು ಇರುವುದಿಲ್ಲ. ಆದರೆ, ಅವರಲ್ಲಿ ಕೌಶಲ್ಯಾಭಿವೃದ್ಧಿ ಯೋಜನೆಗಳ ಬಗ್ಗೆ ಅರಿವು ಮೂಡಿಸಿ, ಕೌಶಲ್ಯ ತರಬೇತಿ ಪಡೆಯಲು ಪ್ರೇರೇಪಿಸಲಾಗುತ್ತಿದೆ.

ವೈಎಸ್‌ಡಿ/ಇಬಿಬಿ/166/2021

(ಡಾ. ನಾರಾಯಣಗೌಡ)
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.